**ಕರ್ನಾಟಕ ವಿಧಾನ ಪರಿಷತ್**
**135ನೇ ಅಧಿವೇಶನ –2018**

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ. | 218(265) |
| ಸದಸ್ಯರ ಹೆಸರು | ಶ್ರೀ ಕೆ.ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 12.07.2018 |

| | ಪ್ರಶ್ನೆ | ಉತ್ತರ |
|---|---|---|
| ಅ. | ಕಳೆದ ಅಕ್ಟೋಬರ್ 2017ರಲ್ಲಿ ಬೆಂಗಳೂರು ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್(ಬೇಸ್) ಸಂಸ್ಥೆ ಸ್ಥಾಪಿತವಾಗಿದ್ದು, ಪ್ರಸ್ತುತ ವರ್ಷದಲ್ಲಿ ಸಂಸ್ಥೆಗೆ ಮಂಜೂರಾದ ಸೀಟುಗಳೆಷ್ಟು; ಹಾಗೂ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಬೆಂಗಳೂರು ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಸಂಸ್ಥೆಯಲ್ಲಿ 2017–18ನೇ ಸಾಲಿನಿಂದ ಅರ್ಥಶಾಸ್ತ್ರ ವಿಷಯದಲ್ಲಿ ಮೊದಲ ವರ್ಷದ ಬಿ.ಎ.(ಹಾನರ್ಸ್) ಕೋರ್ಸನ್ನು ಆರಂಭಿಸಿ 50 ಸೀಟುಗಳಿಗೆ ಪ್ರವೇಶ ಪಡೆಯಲಾಗಿದ್ದ ವಿದ್ಯಾರ್ಥಿಗಳ ಪೈಕಿ ಒಬ್ಬರು ಸಂಸ್ಥೆಯನ್ನು ತ್ಯಜಿಸಿರುತ್ತಾರೆ.<br><br>2018–19ನೇ ಸಾಲಿನಿಂದ 50 ಸಂಖ್ಯೆಯ ವಿದ್ಯಾರ್ಥಿ ಪ್ರವೇಶಾವಕಾಶವಿರುವ ಹಾಗೂ ಐದು ವರ್ಷಗಳ ಅವಧಿಯ ಎಂ.ಎಸ್ಸಿ(ಆನರ್ಸ್) ಕೋರ್ಸನ್ನು ಆರಂಭಿಸಲಾಗಿದೆ. |
| ಆ. | ಈ ಸಂಸ್ಥೆಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು; | ಬೆಂಗಳೂರು ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಸಂಸ್ಥೆಗೆ ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನವನ್ನು ಒದಗಿಸಲಾಗಿರುವುದಿಲ್ಲ.<br><br>ರಾಜ್ಯ ಸರ್ಕಾರದಿಂದ 2017–18ನೇ ಸಾಲಿನಲ್ಲಿ ರೂ.106.96 ಕೋಟಿಗಳನ್ನು ಮಂಜೂರು ಮಾಡಿ 2018–19ನೇ ಸಾಲಿನ ಆಯವ್ಯಯದಲ್ಲಿ ರೂ.10.00 ಕೋಟಿಗಳ ಅನುದಾನದ ಅವಕಾಶ ಕಲ್ಪಿಸಲಾಗಿದೆ. |
| ಇ | ಸಂಸ್ಥೆಯ ನೂತನ ಕಟ್ಟಡದ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ; ಹಾಗೂ ಯಾವಾಗ ಪೂರ್ಣಗೊಳ್ಳುತ್ತದೆ? (ಮಾಹಿತಿ ನೀಡುವುದು) | ಬೆಂಗಳೂರು ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಸಂಸ್ಥೆಯ ಮೊದಲ ಹಂತದ ಮೂಲಸೌಕರ್ಯ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು 2 ವರ್ಷಗಳ ಕಾಲಮಿತಿಯನ್ನು ನಿಗದಿಪಡಿಸಿಕೊಳ್ಳಲಾಗಿದೆ.<br>ಪ್ರಸ್ತುತ ಆದ್ಯತೆಯ ಮೇಲೆ ಕೈಗೊಳ್ಳಲಾಗಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಈ ಕಾಮಗಾರಿಗಳನ್ನು 2018ರ ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |

**ಇಡಿ 168 ಯುಬಿವಿ 2018.**

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು